# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 154 |
| ಸದಸ್ಯರ ಹೆಸರು | : | ಶ್ರೀ ಐವನ್ ಡಿ' ಸೋಜಾ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 28-01-2026 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ) | ಮಂಗಳೂರು-ಮೂಡಬಿದ್ರೆ-ಕಾರ್ಕಳ ಸಂಪರ್ಕದ ರಾಷ್ಟ್ರೀಯ ಹೆದ್ದಾರಿ 169 ರಸ್ತೆ ಕಾಮಗಾರಿಯು ಕಳೆದ ಐದು ವರ್ಷಗಳಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸದೆ ಕಾಮಗಾರಿ ಕುಂಠಿತಗೊಳ್ಳುವುದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; | ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಇವರು ವರದಿಸಿರುವಂತೆ, ಸದರಿ ಹೆದ್ದಾರಿಯ ಕಿ.ಮೀ. **691.350** ರಿಂದ **736.362** ವರೆಗೆ **4** ಪಥಗಳ ಹೆದ್ದಾರಿಯನ್ನಾಗಿ ಅಭಿವೃದ್ಧಿ ಪಡಿಸುವ ಕಾಮಗಾರಿಯನ್ನು HAM ಮಾದರಿಯಡಿ ಕೈಗೊಳ್ಳಲಾಗುತ್ತಿದ್ದು ಕಾಮಗಾರಿಗಳ ವಿವರ ಈ ಕೆಳಕಂಡಂತಿದೆ.<br>1) ಕಾಮಗಾರಿ ಉದ್ದ:-**45** ಕಿ.ಮೀ<br>2) ಕಾಮಗಾರಿಯ ಪ್ರಾರಂಭ ದಿನಾಂಕ:-**10.10.2022.**<br>3) ಕಾಮಗಾರಿಯ ಮುಕ್ತಾಯವಾಗಬಹುದಾದ ದಿನಾಂಕ: **31.12.2026**<br><br>ಸದರಿ ಕಾಮಗಾರಿಯ ಭೂಸ್ವಾಧೀನ, ನ್ಯಾಯಾಲಯ ಪ್ರಕರಣಗಳು ಮತ್ತು ಸಾರ್ವಜನಿಕರ ಬೇಡಿಕೆಯಿಂದಾಗಿ ನಿಧಾನ ಗತಿಯಲ್ಲಿ ಸಾಗಲು ಮುಖ್ಯ ಕಾರಣಗಳಾಗಿವೆ. ಈ ಸಂಬಂಧ, ಲೋಕೋಪಯೋಗಿ ಸಚಿವರ, ಮುಖ್ಯ ಕಾರ್ಯದರ್ಶಿಗಳ ಹಾಗೂ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ ಇವರುಗಳ ಅಧ್ಯಕ್ಷತೆಯಲ್ಲಿ ಸಂಬಂಧಪಟ್ಟ ಜಿಲ್ಲಾಧಿಕಾರಿಗಳೊಂದಿಗೆ ಕಾಮಗಾರಿಯಲ್ಲಿನ ಸಮಸ್ಯೆಗಳನ್ನು ಬಗೆಹರಿಸಲು ನಿಯಮಿತವಾಗಿ ಸಮನ್ವಯ ಸಭೆಗಳನ್ನು ನಡೆಸಲಾಗುತ್ತಿದೆ. |
| ಆ) | ರಾಷ್ಟ್ರೀಯ ಹೆದ್ದಾರಿ ಕಾಮಗಾರಿಯು ಬಹಳ ನಿಧಾನಗತಿಯಲ್ಲಿ ಸಾಗುತ್ತಿರುವುದರ ಪರಿಣಾಮವಾಗಿ ಸಾರ್ವಜನಿಕರು ತೊಂದರೆಗೊಳಗಾಗುತ್ತಿದ್ದು ಭೂಮಿಯನ್ನು ಕಳೆದುಕೊಂಡವರಿಗೆ ಪರಿಹಾರವನ್ನು ವಿತರಣೆ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; | ಸದರಿ ಕಾಮಗಾರಿಯ ಭೂಸ್ವಾಧೀನಕ್ಕೆ ಸಂಬಂಧಿಸಿದಂತೆ ಭೂಸ್ವಾಧೀನಾದಿಕಾರಿಗಳು ಈವರೆಗೆ ರೂ.693.55 ಕೋಟಿ ಪರಿಹಾರ ಧನವನ್ನು ಸರಿಯಾದ ದಾಖಲೆಗಳನ್ನು ಸಲ್ಲಿಸಿರುವ ಭೂಮಾಲೀಕರಿಗೆ ನೀಡಿರುತ್ತಾರೆ. ಅಲ್ಲದೆ, ಭೂಮಾಲೀಕರಿಂದ ಸ್ವಾಧೀನಗೊಂಡ ಭೂ ದಾಖಲೆಗಳನ್ನು ಪಡೆದು ಪರಿಹಾರವನ್ನು ಶೀಘ್ರದಲ್ಲಿ ನೀಡುವ ಸಲುವಾಗಿ ಗ್ರಾಮ ಪಂಚಾಯತ್/ ಗ್ರಾಮ ಮಟ್ಟಗಳಲ್ಲಿ ನಿಯಮಿತವಾಗಿ ಪರಿಹಾರ ಶಿಬಿರಗಳನ್ನು ಆಯೋಜಿಸಲಾಗುತ್ತಿದೆ. |
| ಇ) | ರಾಷ್ಟ್ರೀಯ ಹೆದ್ದಾರಿ-169 ಕಾಮಗಾರಿ ಯಾವಾಗ ಮುಕ್ತಾಯಗೊಳ್ಳುವುದು ಮತ್ತು ಇದಕ್ಕೆ ತಗಲುವ ಒಟ್ಟು ವೆಚ್ಚವೆಷ್ಟು; ದಕ್ಷಿಣಕನ್ನಡ ಜಿಲ್ಲೆಯಲ್ಲಿ | ಸದರಿ ಕಾಮಗಾರಿಯನ್ನು ದಿನಾಂಕ: 31.12.2026 ರೊಳಗೆ ಮುಕ್ತಾಯಗೊಳಿಸಲು ಯೋಜಿಸಲಾಗಿದೆ. ಕಾಮಗಾರಿಯ ಪರಿಷ್ಕೃತ ಮೊತ್ತವು ರೂ.1808.61 ಕೋಟಿಗಳಾಗಿದ್ದು, ಕರಾರು ಒಪ್ಪಂದದ ಮಾನದಂಡಗಳಂತೆ ಹಾಗೂ MoRTH Standards ನಂತೆ ಹೆದ್ದಾರಿಯನ್ನು ನಿರ್ಮಿಸಲಾಗುತ್ತಿದೆ. ಗುತ್ತಿಗೆದಾರರು/ |

| ಕ್ರ ಸಂ. | ಪ್ರಶ್ನೆಗಳು | ಉತ್ತರ |
|---|---|---|
| | ಹಾದುಹೋಗುವ ರಾಷ್ಟ್ರೀಯ ಹೆದ್ದಾರಿಗಳು ಅಸಮರ್ಪಕವಾಗಿ ನಿರ್ಮಾಣಗೊಂಡಿದ್ದು, ಈ ಬಗ್ಗೆ ಇಲಾಖೆ ತನಿಖೆ ನಡೆಸಿದೆಯೇ; ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು; (ವಿವರ ನೀಡುವುದು) | ರಿಯಾಯಿತಿದಾರರು ಸದರಿ ಹೆದ್ದಾರಿಯನ್ನು ವಾಹನ ಸಂಚಾರಕ್ಕೆ Concessionaire Agreement ಪ್ರಕಾರ ಯೋಗ್ಯವಾಗಿರಿಸಿರುತ್ತಾರೆ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ರವರು ವರದಿಸಿರುತ್ತಾರೆ |
| ಈ) | ರಾಷ್ಟ್ರೀಯ ಹೆದ್ದಾರಿಯ ಅನೇಕ ಪ್ಲೈ-ಓವರ್‌ಗಳು ಹಾಗೂ ರಸ್ತೆ ಕಾಮಗಾರಿಯು ಅವೈಜ್ಞಾನಿಕವಾಗಿ ನಡೆದಿದ್ದು, ನೀರು ನಿಲ್ಲುವುದು ಮತ್ತು ಮಳೆಗಾಲದಲ್ಲಿ ರಸ್ತೆದಾಟಲು ಅಸಾಧ್ಯವಾದ ಪರಿಸ್ಥಿತಿ ಉಂಟಾಗುತ್ತಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? | ಸ್ಥಳೀಯ ಸಾರ್ವಜನಿಕರು ಕಾಮಗಾರಿಯ ಕೈಗೊಳ್ಳುವ ಸಮಯದಲ್ಲಿ Culvert ಗಳನ್ನು ಮುಚ್ಚುತ್ತಿರುವುದರಿಂದ ಹೆದ್ದಾರಿ ಭಾಗದಲ್ಲಿ ನೀರು ನಿಲ್ಲುತ್ತಿರುತ್ತದೆ. ಈ ಸಂಬಂಧ ಜಿಲ್ಲಾಧಿಕಾರಿಗಳಿಗೆ ಮನವಿಯನ್ನು ಮಾಡಲಾಗಿದೆಯೆಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ರವರು ವರದಿಸಿರುತ್ತಾರೆ. |
| ಉ) | ರಾಷ್ಟ್ರೀಯ ಹೆದ್ದಾರಿಗಳನ್ನು ನಿರ್ಮಾಣ ಮಾಡಬೇಕಾದ ರಾಷ್ಟೀಯ ಹೆದ್ದಾರಿ ಪ್ರಾಧಿಕಾರದ ರಸ್ತೆಗಳ ಮೇಲೆ ರಾಜ್ಯ ಸರ್ಕಾರದ ನಿಯಂತ್ರಣವೇನು; ಸರ್ಕಾರವು ಯಾವ ರೀತಿಯಲ್ಲಿ ಕಾಮಗಾರಿಗಳನ್ನು ಕಾರ್ಯಗತಗೊಳಿಸಲು ಕ್ರಮಕೈಗೊಂಡಿದೆ? ಈ ಬಗ್ಗೆ ವಿವರ ನೀಡುವುದು? | ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವು ಕೇಂದ್ರ ಭೂಸಾರಿಗೆ ಮತ್ತು ಹೆದ್ದಾರಿಗಳ ಮಂತ್ರಾಲಯದ ಸುಪರ್ದಿಯಲ್ಲಿ ಕಾರ್ಯನಿರ್ವಹಿಸುತ್ತಿದೆ.<br><br>ಕಾಮಗಾರಿಯ ಸಮಸ್ಯೆಯನ್ನು ಬಗೆಹರಿಸಲು ರಾಜ್ಯದ ಉನ್ನತ ಮಟ್ಟದ ಅಧಿಕಾರಿಗಳೊಂದಿಗೆ ಸಮನ್ವಯ ಸಭೆಗಳನ್ನು ರಾಜ್ಯ ಸರ್ಕಾರದಿಂದ ನಡೆಸಲಾಗುತ್ತಿದೆ. |

ಸಂಖ್ಯೆ: ಲೋಇ 56 ಸಿಎನ್‌ಹೆಚ್ 2026 (ಇ)

(ಸತೀಶ ಜಾರಕಿಹೊಳಿ)
ಲೋಕೋಪಯೋಗಿ ಸಚಿವರು